# ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ: ಕೇಂದ್ರ ಕಛೇರಿ: ಕಲಬುರಗಿ

ಸಂ.ಕಕರಸಾ:ಕೇಕ:ಸಂ:ಪಾಸ್: 4504 :21-22 ದಿನಾಂಕ:23.03.2022.

## ಸುತ್ತೋಲೆ

**ವಿಷಯ:** ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ವಾಹನಗಳಲ್ಲಿ ಪ್ರಯಾಣಿಸಲು ಅನುಮತಿಸುವ ಬಗ್ಗೆ.

**ಉಲ್ಲೇಖ:** 1. ಸಂ:ಕರಾಸಾ:ಕೇಕ:ಸಂ:ವಾ:ಸಿ2:2201:2021-22 ದಿ:18.03.2022.

2. ಸೂಕ್ತಾಧಿಕಾರಿಗಳ ಆದೇಶ ದಿನಾಂಕ:22.03.2022

@@@@@

2021-22 ನೇ ಸಾಲಿನ ಕರ್ನಾಟಕದ ಎಸ್.ಎಸ್.ಎಲ್.ಸಿ ಅಂತಿಮ ಪರೀಕ್ಷೆಗಳನ್ನು ಸರ್ಕಾರದ ಆದೇಶದಂತೆ ದಿನಾಂಕ:28.3.2022 ರಿಂದ 11.04.2022 ರವರೆಗೆ ನಡೆಸಲು ತೀರ್ಮಾನಿಸಿದ್ದು, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಮುಖ್ಯ ಸಂಚಾರ ವ್ಯವಸ್ಥಾಪಕರು ಕರಾರಸಾ ನಿಗಮ ಬೆಂಗಳೂರು ರವರು ಉಲ್ಲೇಖ-1 ರನ್ವಯ ಸುತ್ತೋಲೆಯನ್ನು ಹೊರಡಿಸಿರುತ್ತಾರೆ. ಅದರಂತೆ ಸೂಕ್ತಾಧಿಕಾರಿಗಳಾದ ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ಉಲ್ಲೇಖ-2 ರನ್ವಯ ಅನುಮೋದನೆ ನೀಡಿರುತ್ತಾರೆ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ **ಕ.ಕ.ರ.ಸಾ ನಿಗಮ** ಎಸ್.ಎಸ್.ಎಲ್.ಸಿ ಪರೀಕ್ಷೆ ನಡೆಯುವ ದಿನಾಂಕ:28.3.2022 ರಿಂದ 11.04.2022 ರವರೆಗೆ ಪರೀಕ್ಷೆಗೆ ಹಾಜರಾಗುವ ರಾಜ್ಯದ ಎಲ್ಲಾ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ **"ಎಸ್.ಎಸ್.ಎಲ್.ಸಿ ಪರೀಕ್ಷಾ ಪ್ರವೇಶ ಪತ್ರವನ್ನು"** ತೋರಿಸಿ, ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಸಂಬಂಧ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ವಾಸಸ್ಥಳಕ್ಕೆ ಮರಳಲು ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಉಚಿತ ಪ್ರಯಾಣವನ್ನು ಅನುಮತಿಸಲು ನಿಗಮದ ಎಲ್ಲಾ ಚಾಲಕ / ನಿರ್ವಾಹಕರುಗಳಿಗೆ ಸೂಕ್ತ ತಿಳುವಳಿಕೆ ನೀಡಲು ಸೂಚಿಸಲಾಗಿದೆ. ಮುಂದುವರೆದು ಪ್ರವೇಶ ಪತ್ರದ ಆಧಾರದ ಮೇಲೆ ಬಸ್ಸು ಆಚರಣೆ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳು ಬಸ್ಸನ್ನು ಹತ್ತುವವರಿದ್ದಲ್ಲಿ ಹಾಗೂ ಆಚರಣಾ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿದ್ದಲ್ಲಿ, ವಿದ್ಯಾರ್ಥಿಗಳು ಬಸ್ಸನ್ನು ಹತ್ತಲು/ ಇಳಿಯಲು ಅನುಕೂಲವಾಗುವಂತೆ ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳುವುದು.

ಚಾಲನಾ ಸಿಬ್ಬಂದಿಗಳು ಮೇಲ್ಕಂಡ ನಿರ್ದೇಶನಗಳನ್ನು ತಪ್ಪದೇ ಪಾಲಿಸುವುದು.

ಈ ಸುತ್ತೋಲೆಯನ್ನು ಎಲ್ಲಾ ಘಟಕ ಹಾಗೂ ಬಸ್ ನಿಲ್ದಾಣಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಿ ಮೇಲ್ಕಂಡ ನಿರ್ದೇಶನಗಳನ್ನು ಜಾರಿಗೊಳಿಸಲು ಕ್ರಮ ವಹಿಸುವುದು.

ಸಹಿ/-

**ವ್ಯವಸ್ಥಾಪಕ ನಿರ್ದೇಶಕರು**

**ಪ್ರತಿಯನ್ನು** ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು, ಕ.ಕ.ರ.ಸಾ ನಿಗಮ, ಕೇಂದ್ರ ಕಛೇರಿ, ಕಲಬುರಗಿ ರವರ ಮಾಹಿತಿಗಾಗಿ.

**ಪ್ರತಿಯನ್ನು** ಎಲ್ಲಾ ಇಲಾಖಾ ಮುಖ್ಯಸ್ಥರು ಕಕರಸಾ ನಿಗಮ ಕೇಕ, ಕಲಬುರಗಿ ರವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:** ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ಕ.ರ.ಸಾ.ನಿಗಮ, ಕಲಬುರಗಿ ವಿಭಾಗ-1/ವಿಭಾಗ-2/ಬೀದರ/ ಯಾದಗೀರ/ರಾಯಚೂರು/ಬಳ್ಳಾರಿ/ಹೊಸಪೇಟೆ/ಕೊಪ್ಪಳ/ವಿಜಯಪುರ ರವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು** ಉ.ಮು.ಸಂ.ವ್ಯ (ಕೇತದ), ಕಕರಸಾ ನಿಗಮ ಕೇಕ, ಕಲಬುರಗಿ ರವರ ಮಾಹಿತಿಗಾಗಿ & ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು** ಪ್ರಾಂಶುಪಾಲರು, ಪ್ರಾ.ತ.ಕೇಂ. ಕಕರಸಾ ನಿಗಮ :ಹುಮನಾಬಾದ/ಎಚ್.ಬಿ.ಹಳ್ಳಿ ರವರ ಮಾಹಿತಿಗಾಗಿ.

**ಮುಖ್ಯ ಸಂಚಾರ ವ್ಯವಸ್ಥಾಪಕರು**



Scanned with CamScanner